ಎಂಟು ವರ್ಷ ಕಳೆದರೂ ಪೂರ್ಣಗೊಳ್ಳದ ಬಹುಮಹಡಿ ಕಟ್ಟಡದ ಕಾಮಗಾರಿ, ಬೀದಿಬದಿಯಲ್ಲೇ ವ್ಯಾಪಾರ

‘ಸಂಪಿಗೆ ರಸ್ತೆ’ಯ ಹೂವು ಮಾರುಕಟ್ಟೆಗಿಲ್ಲ ಕಂಪು

• ಆದಿತ್ಯ ಕೆ.ಎ.

ಮಲ್ಲೇಶ್ವರದ ಸಂಪಿಗೆ ರಸ್ತೆಬದಿಯಲ್ಲೇ ನಡೆಯುತ್ತಿರುವ ಹೂವಿನ ಮಾರುಕಟ್ಟೆ.

ಎಂಟು ವರ್ಷಗಳಿಂದ ಹೂವಿನ ಮಾರುಕಟ್ಟೆ ಕಾಮಗಾರಿ ನಡೆಯುತ್ತಿದ್ದರೂ ಪೂರ್ಣಗೊಂಡಿಲ್ಲ –ಪ್ರಜಾವಾಣಿ ಚಿತ್ರಗಳು



ರಸ್ತೆಯ ಹಿಂಬದಿಯಲ್ಲಿ ನಿರ್ಮಿಸಿರುವ ತಾತ್ಕಾಲಿಕ ಶೆಡ್‌ಗಳಿಗೆ ಬೀಗ ಬಿದ್ದಿದೆ.

ಬೆಂಗಳೂರು: ಮಲ್ಲೇಶ್ವರದ ಸಂಪಿಗೆ ರಸ್ತೆಯ ಬದಿಯಲ್ಲಿ ಬಗೆಬಗೆಯ ಹೂವಿನ ರಾಶಿಯು ನಿತ್ಯವೂ ಪಾದಚಾರಿಗಳು, ವಾಹನ ಸವಾರರು ಹಾಗೂ ಖರೀದಿದಾರರ ಕಣ್ಮನ ಸೆಳೆಯುತ್ತದೆ. ಈ ರಸ್ತೆಯಲ್ಲಿ ಹೂವುಗಳು ಕಂಪು ಬೀರಿದರೂ ವ್ಯಾಪಾರಸ್ಥರ ಬದುಕು ಮಾತ್ರ ಸುಂದರವಾಗಿಲ್ಲ. ಅವರ ಬದುಕು ಬೀದಿಗೆ ಬಿದ್ದಿದೆ.

ಮಲ್ಲೇಶ್ವರದ 12 ಹಾಗೂ 13ನೇ ಕ್ರಾಸ್‌ನ ರಸ್ತೆ ಬದಿಯಲ್ಲಿ ಕಳೆದ ಕೆಲವು ವರ್ಷಗಳಿಂದ ಹೂವಿನ ವ್ಯಾಪಾರ ನಡೆಸುವವರ ಸಮಸ್ಯೆಗಳಿಗೆ ಕಿವಿಯಾದರೆ ಅವರ ಸಂಕಷ್ಟಗಳು ಅನಾವರಣಗೊಳ್ಳುತ್ತವೆ. ಬಣ್ಣ ಬಣ್ಣದ ಹಾಗೂ ವಿವಿಧ ತಳಿಯ ಹೂವುಗಳು ಬಂದರೂ ಸುಸಜ್ಜಿತ ಮಾರುಕಟ್ಟೆ ವ್ಯವಸ್ಥೆ ಇಲ್ಲವಾಗಿದೆ.

ರಸ್ತೆ ಬದಿಯಲ್ಲೇ 50ಕ್ಕೂ ಹೆಚ್ಚು ಮಂದಿ ವ್ಯಾಪಾರ ನಡೆಸುತ್ತಿದ್ದು, ಕನಿಷ್ಠ ಸೌಲಭ್ಯಗಳು ಮಾರುಕಟ್ಟೆಯಲ್ಲಿ ಇಲ್ಲದೇ ತಪ್ಪಿಸುತ್ತಿದ್ದಾರೆ. ಅದೇ ಮಾರ್ಗದಲ್ಲಿ ಜನಪ್ರತಿನಿಧಿಗಳು, ಬಿಡಿಎ ಹಾಗೂ ಬಿಬಿಎಂಪಿ ಅಧಿಕಾರಿಗಳೂ ಸಾಗಿದರೂ ವ್ಯಾಪಾರಸ್ಥರ ಸಮಸ್ಯೆಗೆ ಪರಿಹಾರ ಸಿಗುತ್ತಿಲ್ಲ.

100ಕ್ಕೂ ಹೆಚ್ಚು ವ್ಯಾಪಾರಸ್ಥರು ರಸ್ತೆಬದಿಯ ಹಳೇ ಕಟ್ಟಡದಲ್ಲಿ 60 ವರ್ಷಗಳಿಂದ ವ್ಯಾಪಾರ ನಡೆಸುತ್ತಿದ್ದರು. ಅವರಿಗೆ ಬಹುಮಹಡಿ ಕಟ್ಟಡ ನಿರ್ಮಿಸಿಕೊಡುವ ಭರವಸೆ ಮೇಲೆ ಅಲ್ಲಿಂದ ತೆರವುಗೊಳಿಸಲಾಗಿತ್ತು. ಅದರ ಪಕ್ಕವೇ 87 ತಾತ್ಕಾಲಿಕ ಶೆಡ್‌ಗಳನ್ನು ₹ 1.35 ಕೋಟಿ ವೆಚ್ಚದಲ್ಲಿ ನಿರ್ಮಿಸಿ ಅಲ್ಲಿಗೆ ಸ್ಥಳಾಂತರಿಸಲಾಗಿತ್ತು. ಎರಡು ವರ್ಷದ ಒಳಗೆ ಬಹುಮಹಡಿಯ ಸುಸಜ್ಜಿತ ಕಟ್ಟಡ ನಿರ್ಮಿಸುವುದಾಗಿ, 2015ರಲ್ಲಿ ಕಾಮಗಾರಿ ಆರಂಭಿಸಿದ್ದ ಬಿಡಿಎ, 8 ವರ್ಷ ಕಳೆದರೂ ಪೂರ್ಣಗೊಳಿಸಿಲ್ಲ ಎಂದು ವ್ಯಾಪಾರಸ್ಥರು ಅಳಲು ತೋಡಿಕೊಳ್ಳುತ್ತಾರೆ.

ಮಾರುಕಟ್ಟೆ ಕಷ್ಟ ಸಿಕ್ಕಾಪಟ್ಟೆ

ಏನೆಲ್ಲಾ ಲಭಿಸುತ್ತಿವೆ?: ಬಿಡಿ ಹೂವು, ಕಟ್ಟಿದ ಹಾರ, ಬಾಳೆಯ ಎಲೆ, ತರಕಾರಿ, ಮಾವಿನ ಸೊಪ್ಪು, ಎಲೆ-ಅಡಿಕೆ, ಪೂಜಾ ಸಾಮಾಗ್ರಿ ಸೇರಿದಂತೆ ಅಗತ್ಯ ವಸ್ತುಗಳು ಇಲ್ಲಿ ಲಭಿಸುತ್ತಿವೆ. ಮಲ್ಲೇಶ್ವರ ಸೇರಿದಂತೆ ಸುತ್ತಮುತ್ತ ಬಡಾವಣೆಗಳಿಗೆ ಪ್ರಸಿದ್ಧಿಯಾಗಿದ್ದ ಹೂವಿನ ಮಾರುಕಟ್ಟೆ ಈಗ ಸೊರಗಿದೆ.

ಮಳೆ ಬಂದರೆ ಕೆಸರು ವಾತಾವರಣ ನಿರ್ಮಾಣವಾಗಲಿದೆ. ಅಲ್ಲದೇ ಸೊಳ್ಳೆ ಕಾಟವೂ ವಿಪರೀತವಾಗಿದೆ. ಸೊಳ್ಳೆ ಕಾಟದಿಂದ ಸಂಜೆ 5 ಗಂಟೆಗೆ ಬಾಗಿಲು ಬಂದ್ ಮಾಡುವ ಸ್ಥಿತಿಯಿದೆ. ರಾಜಕಾಲುವೆ ಮೇಲೆ ತಾತ್ಕಾಲಿಕ ಶೆಡ್ ನಿರ್ಮಿಸಲಾಗಿದ್ದು, ದುರ್ವಾಸನೆ ನಡುವೆ ವ್ಯಾಪಾರ ನಡೆಸುತ್ತಿದ್ದಾರೆ.

ರಸ್ತೆಬದಿಯಲ್ಲಿ ತಾತ್ಕಾಲಿಕ ಮಳಿಗೆ ಇರುವ ಕಾರಣಕ್ಕೆ ಗ್ರಾಹಕರು ಅಪಾಯದಲ್ಲಿ ಹೂವು-ಹಣ್ಣು ಖರೀದಿಸುತ್ತಿದ್ದಾರೆ. ಒಂದು ವೇಳೆ ವಾಹನಗಳ ಬ್ರೇಕ್ ವಿಫಲವಾದರೆ ಅಪಾಯ ಸಂಭವಿಸುವ ಸಾಧ್ಯತೆಯಿದೆ. ರಸ್ತೆಯಿಂದ ಸ್ವಲ್ಪ ಹಿಂಭಾಗದಲ್ಲಿ ನಿರ್ಮಿಸಿರುವ ಮಳಿಗೆಗಳಿಗೆ ಗ್ರಾಹಕರ ಕೊರತೆಯಿದ್ದು ಬಂದ್ ಆಗಿವೆ. ಅಲ್ಲಿಗೆ ರಾತ್ರಿವೇಳೆ ಪುಂಡರು ಬಂದು ಗಾಂಜಾ ಹಾಗೂ ಮದ್ಯ ಸೇವಿಸುತ್ತಿದ್ದಾರೆ ಎಂದು ಸ್ಥಳೀಯರು ಹೇಳುತ್ತಾರೆ.

‘ಹೂವಿನ ವ್ಯಾಪಾರದಲ್ಲಿ ಲಾಭ ಕಡಿಮೆ. ಹೂವುಗಳು ಬಾಡುತ್ತವೆ. ಮರುದಿವಸ ಮಾರಾಟ ನಡೆಸುವುದು ಕಷ್ಟ. ಜತೆಗೆ, ಮಾರುಕಟ್ಟೆ ಸಮಸ್ಯೆ ಬೇರೆ. ಇಷ್ಟೊಂದು ಕಷ್ಟ ಬೇಡವೆಂದು ಹಲವರು ಬೇರೆ ವೃತ್ತಿಗೆ ಹೋಗಿದ್ದಾರೆ’ ಎಂದು ಮಾರಾಟಗಾರ ರಾಮೋಜಿರಾವ್ ಹೇಳಿದರು

ಹುಸಿಯಾದ ಭರವಸೆ: ಹಿಂದಿನ ಸರ್ಕಾರ ಅವಧಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿದ್ದ ಎಸ್.ಆರ್. ವಿಶ್ವನಾಥ್ ಅವರು ಡಿಸೆಂಬರ್ ಒಳಗೆ ಕಟ್ಟಡ ಲೋಕಾರ್ಪಣೆ ಮಾಡಲಾಗುವುದು ಎಂದು ಭರವಸೆ ನೀಡಿದ್ದರು. ಅವರ ಹೇಳಿಕೆ ಗಡುವು ಮುಗಿದು ಏಳು ತಿಂಗಳು ಕಳೆದಿದೆ. ಆದರೆ, ಶೇ 50ರಷ್ಟು ಕಾಮಗಾರಿಯೂ ಪೂರ್ಣಗೊಂಡಿಲ್ಲ. ಕಾಂಗ್ರೆಸ್ ಸರ್ಕಾರವಾದರೂ ನಮ್ಮ ಬೇಡಿಕೆ ಈಡೇರಿಸಲಿ ಎಂದು ಸಂಘದ ಪದಾಧಿಕಾರಿಗಳು ಆಗ್ರಹಿಸಿದರು.

ಮಾರುಕಟ್ಟೆ ಅವ್ಯವಸ್ಥೆ ಕುರಿತು ಗಮನ ಸೆಳೆಯಲು ಕ್ಷೇತ್ರದ ಶಾಸಕ ಸಿ.ಎನ್.ಅಶ್ವತ್ಥ ನಾರಾಯಣ್ ಅವರನ್ನು ಸಂಪರ್ಕಿಸಿದರೂ ಅವರು ಪ್ರತಿಕ್ರಿಯೆಗೆ ಲಭ್ಯವಾಗಲಿಲ್ಲ.

ಹೂವಿಗೂ ಕಳ್ಳರ ಕಾಟ

‘ತಾತ್ಕಾಲಿಕ ಮಳಿಗೆಗಳಿಗೆ ಬಾಗಿಲು ನಿರ್ಮಿಸಿಲ್ಲ. ರಾತ್ರಿ ವೇಳೆ ಕಳ್ಳರು ಹೂವು ಹಾಗೂ ಬ್ಯಾಟರಿ ಕಳವು ಮಾಡಿ ಪರಾರಿ ಆಗುತ್ತಿದ್ದಾರೆ. ಪೊಲೀಸರಿಗೆ ದೂರು ನೀಡಲಾಗಿತ್ತು. ಪೊಲೀಸರು ಸ್ಥಳಕ್ಕೆ ಬಂದು ಪರಿಶೀಲನೆ ನಡೆಸಿದ್ದರು. ಆದರೆ, ಕಳ್ಳರು ಪತ್ತೆಯಾಗುತ್ತಿಲ್ಲ. ಈಗ ಸ್ವಲ್ಪ ದೂರದಲ್ಲಿ ಸಿಸಿ ಟಿವಿ ಕ್ಯಾಮೆರಾ ಅಳವಡಿಸಲಾಗಿದೆ’ ಎಂದು ಹೂವು ವ್ಯಾಪಾರಸ್ಥರು ಹೇಳುತ್ತಾರೆ.

ಬಹುಮಹಡಿ ಕಟ್ಟಡದಲ್ಲಿ ಏನಿರಲಿದೆ?

- ಕಟ್ಟಡದ ಎರಡು ನೆಲಮಹಡಿಗಳಲ್ಲಿ ಸಾರ್ವಜನಿಕ ವಾಹನ ನಿಲುಗಡೆ ವ್ಯವಸ್ಥೆ ಕಲ್ಪಿಸಲು ಉದ್ದೇಶಿಸಲಾಗಿದೆ.
- ಮೊದಲ ಮಹಡಿಯಲ್ಲಿ ಹೂವು-ಹಣ್ಣು ವ್ಯಾಪಾರಿಗಳಿಗೆ 181 ಮಳಿಗೆ ನಿರ್ಮಿಸಲು ತೀರ್ಮಾನಿಸಲಾಗಿದೆ.
- 2ರಿಂದ 4ನೇ ಮಹಡಿವರೆಗೆ ವಾಣಿಜ್ಯ ಸಂಕೀರ್ಣ ನಿರ್ಮಿಸಲು ಯೋಜನೆ ರೂಪಿಸಲಾಗಿದೆ.
- ಮೊದಲ ಮಹಡಿಯಿಂದ ನಾಲ್ಕನೇ ಮಹಡಿವರೆಗೆ ನಿರ್ಮಾಣವಾಗಲಿರುವ ಮಳಿಗೆಗಳು ಬಿಡಿಎಗೆ ಸೇರಿರುತ್ತವೆ. ಇವುಗಳನ್ನು ಬಾಡಿಗೆ ಅಥವಾ ಗುತ್ತಿಗೆ ಆಧಾರದಲ್ಲಿ ಮಾಲ್‌ಗಳಿಗೆ ಅಥವಾ ಇತರ ವಾಣಿಜ್ಯ ಚಟುವಟಿಕೆಗಳಿಗೆ ನೀಡಲು ಬಿಡಿಎ ಉದ್ದೇಶಿಸಿದೆ.

ವ್ಯಾಪಾರಿಗಳ ಅಳಲು

ಕಾಮಗಾರಿ ಪೂರ್ಣಗೊಳಿಸಿ ಮಳಿಗೆಗಳನ್ನು ಹಸ್ತಾಂತರಿಸುವಂತೆ ಬಿಡಿಎ ಹಾಗೂ ಬಿಬಿಎಂಪಿ ಕಚೇರಿಗೆ ಅಲೆದು ಸಾಕಾಗಿದೆ. ಮಾರುಕಟ್ಟೆ ಬಳಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸುವಂತೆ ಸ್ಥಳೀಯ ಶಾಸಕರಿಗೆ ಮನವಿ ಸಲ್ಲಿಸಲಾಗಿತ್ತು. ಇದಕ್ಕೆ ಮನ್ನಣೆ ಸಿಕ್ಕಿಲ್ಲ. ಸುಭದ್ರ ಕಟ್ಟಡ ತೆರವುಗೊಳಿಸಿ ವ್ಯಾಪಾರಿಗಳನ್ನು ಬೀದಿಗೆ ತಳ್ಳಿಬಿಟ್ಟರು.

– **ಲಕ್ಷ್ಮಣ್,** ಅಧ್ಯಕ್ಷ, ಹೂವು ಹಾಗೂ ಹಣ್ಣಿನ ವ್ಯಾಪಾರಿಗಳ ಸಂಘ



ಮಳೆಗಾಲದಲ್ಲಿ ರಸ್ತೆಯಲ್ಲಿ ಹರಿಯುವ ನೀರು ಮಳಿಗೆ ಸೇರುತ್ತಿತ್ತು. ಸ್ವಂತ ಖರ್ಚಿನಲ್ಲಿ ನೀರು ಒಳ ಪ್ರವೇಶಿಸದಂತೆ ಕಟ್ಟೆ ನಿರ್ಮಿಸಿಕೊಂಡಿದ್ದೇವೆ. ರಸ್ತೆಯ ದೂಳು ಅಂಗಡಿಯ ಒಳಕ್ಕೇ ಬರುತ್ತದೆ. ಮಧ್ಯಾಹ್ನ ಊಟ ಮಾಡುವುದಕ್ಕೂ ತೊಂದರೆಯಾಗಿದೆ.

– **ರಾಮೋಜಿರಾವ್**

ತಾತ್ಕಾಲಿಕ ಶೆಡ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿಲ್ಲ. ಮನೆಯಿಂದಲೇ ಬ್ಯಾಟರಿ ಚಾರ್ಜ್ ಮಾಡಿಕೊಂಡು ಬರುತ್ತೇವೆ. ಆಕಸ್ಮಿಕವಾಗಿ ಬ್ಯಾಟರಿಯನ್ನು ರಾತ್ರಿ ಬಿಟ್ಟು ಹೋದರೆ ಅವುಗಳು ಕಳ್ಳರ ಪಾಲಾಗಿರುತ್ತವೆ.

– **ಮುನಿರತ್ನಮ್ಮ**

ಹೂವಿನ ವ್ಯಾಪಾರವನ್ನೇ ನಂಬಿ ಬದುಕುತ್ತಿದ್ದೇವೆ. ಆದಷ್ಟು ಬೇಗನೇ ಬಹುಮಹಡಿ ಕಟ್ಟಡ ನಿರ್ಮಿಸಿಕೊಡಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರೇ ಇಲ್ಲಿ ವ್ಯಾಪಾರ ನಡೆಸುತ್ತಾರೆ. ಅವರಿಗೆ ಶೌಚಾಲಯ ನಿರ್ಮಿಸಿಕೊಟ್ಟಿಲ್ಲ. ದೂರದ ಬಿಜೆಪಿ ಕಚೇರಿ ಬಳಿಯಿರುವ ಶೌಚಾಲಯಕ್ಕೆ ತೆರಳಬೇಕು. ಅಲ್ಲಿಗೆ ಹೋಗಲು ಸಾಕಷ್ಟು ಸಮಯ ಹಿಡಿಯುತ್ತದೆ. ಆ ವೇಳೆ ಹತ್ತಾರು ಗ್ರಾಹಕರು ಬಂದು ಹೋಗಿರುತ್ತಾರೆ. ಇತ್ತ ವ್ಯಾಪಾರವೂ ನಷ್ಟವಾಗುತ್ತಿದೆ.

– **ಕಲಾ**

ನಿರ್ಮಾಣ ಹಂತದ ಕಟ್ಟಡದಲ್ಲಿ ಕಿರಿದಾದ ಮಳಿಗೆ ನಿರ್ಮಿಸಲಾಗುತ್ತಿದೆ. ಇದರಿಂದ ವ್ಯಾಪಾರಕ್ಕೆ ತೊಂದರೆಯಾಗುವ ಸಾಧ್ಯತೆಯಿದೆ. ವಿಸ್ತೀರ್ಣ ದೊಡ್ಡದು ಮಾಡಬೇಕು.

– **ಸುನಿಲ್**

ನಗರದಲ್ಲಿ ಇಂದು

ಅಂತರ ಕಾಲೇಜು ಸಾಂಸ್ಕೃತಿಕ ಹಬ್ಬ ‘ಕಲಾ ಪರ್ವ-2023’: ಸಾಂಸ್ಕೃತಿಕ ಹಬ್ಬ ಶೀರ್ಷಿಕೆ ಅನಾವರಣ: ರಾಜ್ ಬಿ. ಶೆಟ್ಟಿ, ಅತಿಥಿಗಳು: ಬಿ.ಎಸ್. ರಾಗಿಣಿ ನಾರಾಯಣ್, ಅರ್ಚನಾ ಕೊಟ್ಟಿಗೆ, ದಯಾನಂದ್ ಪೈ, ಅವಿರಾಮ್ ಶರ್ಮಾ, ರವಿ ವೆಂಕಟೇಸಂ, ಸ್ಟ್ಯಾಂಡ್ ಅಪ್ ಕಾಮಿಡಿ: ಅಕ್ಷಯ್ ಮತ್ತು ತಂಡ, ಆಯೋಜನೆ ಮತ್ತು ಸ್ಥಳ: ಬಿ.ಎಂ.ಎಸ್ ಮಹಿಳಾ ಮಹಾವಿದ್ಯಾಲಯ, ಬಸವನಗುಡಿ, ಬೆಳಿಗ್ಗೆ 9.30ರಿಂದ

ಹರಿನಾಮ ಸಂಕೀರ್ತನೆ: ಗಾಯನ: ಸುಷ್ಮಾ ಜೋಯಿಸ್ ಸಿಂಧನೂರು, ಕೀ-ಬೋರ್ಡ್: ಅಮಿತ್ ಶರ್ಮಾ, ತಬಲಾ: ಸರ್ವೋತ್ತಮ, ಆಯೋಜನೆ ಮತ್ತು ಸ್ಥಳ: ನಂಜನಗೂಡು ರಾಘವೇಂದ್ರ ಸ್ವಾಮಿ ಮಠ, ಪವಮಾನಪುರ, ಸಂಜೆ 7

‘ಶ್ರೀಕೃಷ್ಣ ಸಂಧಾನ’ ನಾಟಕ ಪ್ರದರ್ಶನ: ರಚನೆ: ವಿ.ಎನ್. ಅಶ್ವತ್ಥ್, ನಿರ್ದೇಶನ: ಪೋಟೊ ವೆಂಕಿ, ಅತಿಥಿಗಳು: ಮಂಜುನಾಥ್, ಮುನಿರಾಜ್, ನಂದ ಕುಮಾರ್, ಟಿ.ಎನ್. ಮಂಜುನಾಥ್, ಆಯೋಜನೆ: ಸಿಂಧು ಭೈರವಿ ಕಲಾ ತಂಡ ಟ್ರಸ್ಟ್, ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಸಂಜೆ 4.30ರಿಂದ

‘ಬೀಚಿ ನಗೆಯ ದೊರೆಯಷ್ಟೇ ಅಲ್ಲ ಒಬ್ಬ ದಾರ್ಶನಿಕ’ ಕುರಿತು ಉಪನ್ಯಾಸ: ಎಸ್. ವೆಂಕಟೇಶ್ ಕೊಟ್ಟೂರು, ಅತಿಥಿ: ಎಂ.ಸಿ. ನರೇಂದ್ರ, ಅಧ್ಯಕ್ಷತೆ: ಜಗದೀಶ ರೆಡ್ಡಿ, ಆಯೋಜನೆ ಮತ್ತು ಸ್ಥಳ: ಕನ್ನಡ ಯುವಜನ ಸಂಘದ ಸಭಾಂಗಣ, ಹೊಂಬೆಗೌಡನಗರ, ಸಂಜೆ 6.30

ಪ್ರವಚನ ವಾಹಿನಿ: ‘ವಚನಕಾರರ ಮನೋವಿಶ್ಲೇಷಣೆ’ ಕುರಿತ ಉಪನ್ಯಾಸ: ವರದರಾಜ ಐಯ್ಯಂಗಾರ್, ಆಯೋಜನೆ ಮತ್ತು ಸ್ಥಳ: ರಾಗಿಗುಡ್ಡದ ಪ್ರಸನ್ನ ಆಂಜನೇಯಸ್ವಾಮಿ ಭಕ್ತ ಮಂಡಳಿ ಟ್ರಸ್ಟ್, ಜಯನಗರ, ಸಂಜೆ 6.30

ಹರಿದಾಸ ಝೇಂಕಾರ: ಗಾಯನ: ಪೂಜಾ ತಾಯೂರ್, ಪಿಟೀಲು: ಬಳ್ಳಾರಿ ಸುರೇಶ್, ಮೃದಂಗ: ಮುರಳಿ ನಾರಾಯಣರಾವ್, ಆಯೋಜನೆ ಮತ್ತು ಸ್ಥಳ: ನಂಜನಗೂಡು ರಾಘವೇಂದ್ರ ಸ್ವಾಮಿ ಮಠ, ಜಯನಗರ, ಸಂಜೆ 7.30

‘ಮಾಯಾ ಉತ್ಸವ’ ಆಗಸ್ಟ್ 6ಕ್ಕೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ರಾಷ್ಟ್ರೀಯ ಕೈಮಗ್ಗ ದಿನಾಚರಣೆಯ ಅಂಗವಾಗಿ ಮಹಿಳಾ ಮಾಲೀಕತ್ವದ ಬೆಂಗಳೂರಿನ ‘ಮಾಯಾ’ ಸಂಸ್ಥೆಯಿಂದ ‘ಮಾಯಾ ಉತ್ಸವ’ವನ್ನು ಆ.6ರಂದು ಬೆಳಿಗ್ಗೆ 10ರಿಂದ ಬಸವನಗುಡಿಯಲ್ಲಿರುವ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಭಾರತೀಯ ದೇವಾಲಯದ ಇತಿಹಾಸ ತಜ್ಞೆ ಚಿತ್ರ ಮಾಧವನ್ ಅವರು ‘ಕಾಂಜೀವರಂ ಮೋಟಿಫ್‌ಗಳು, ದೇವಸ್ಥಾನಗಳ ವಾಸ್ತುಶಿಲ್ಪಗಳ ಸ್ಫೂರ್ತಿ’ ಬಗ್ಗೆ ಶ್ರವ್ಯ, ದೃಶ್ಯ ಪ್ರಸ್ತುತಿ ಮಾಡಲಿದ್ದಾರೆ. ಸಂಧ್ಯಾ ರಾವ್ ಉಡುಪ ಅವರ ಭರತನಾಟ್ಯ ಮತ್ತು ಅನುಶ್ರೀ ಪದ್ಮನಾಭ ಅವರ ಒಡಿಶಿ ಜುಗಲ್‌ಬಂದಿ ನೃತ್ಯ ಪ್ರದರ್ಶನಗೊಳ್ಳಲಿದೆ ಎಂದು ಮಾಯಾ ಸಂಸ್ಥಾಪಕಿ ಸ್ಮಿತಾ ಶ್ರೀನಾಥ್ ಹೇಳಿದ್ದಾರೆ.

ಮಾಹಿತಿ ಮತ್ತು ನೋಂದಣಿಗೆ ಮೊಬೈಲ್: 99023 56001 ಇ ಮೇಲ್: weavemaya@gmail.com ಸಂಪರ್ಕಿಸಬಹುದು.

ಉಚಿತ ಜ್ಯೋತಿಷ ತರಗತಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಜ್ಯೋತಿಷ ಅಧ್ಯಯನ ಮತ್ತು ಸಂಶೋಧನಾ ಸಂಸ್ಥೆಯಾದ ಜ್ಞಾನಜ್ಯೋತಿ ಜ್ಯೋತಿಷ ವಿದ್ಯಾ ಕೇಂದ್ರ ಪ್ರಸಕ್ತ ಸಾಲಿನ ಜ್ಯೋತಿಷ, ವಾಸ್ತು, ಹಸ್ತ ಸಾಮುದ್ರಿಕಾ ತರಗತಿಗಳನ್ನು ಜುಲೈ 30 ರಿಂದ ಉಚಿತವಾಗಿ ನಡೆಸಲಿದೆ.

ತರಗತಿಗಳು ಪ್ರತಿ ಭಾನುವಾರ 11.00 ರಿಂದ 2.00 ಗಂಟೆಯವರೆಗೆ, ಬಿಟಿಎಂ ಬಡಾವಣೆಯ ಬಸ್ ನಿಲ್ದಾಣದ ಸಮೀಪ ಇರುವ ವಿದ್ಯಾಜ್ಯೋತಿ ಶಾಲೆ, 3ನೇ ಅಡ್ಡರಸ್ತೆ, 3ನೇ ಮುಖ್ಯರಸ್ತೆ, 2ನೇ ಹಂತ, ಬಿಟಿಎಂ ಬಡಾವಣೆ, ಬೆಂಗಳೂರು-560068ನಲ್ಲಿ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಅಧ್ಯಕ್ಷ ಡಾ. ಆರ್.ಕೃಷ್ಣಕುಮಾರ್ ಮೊಬೈಲ್ ಸಂಖ್ಯೆ 9945523296 ರಲ್ಲಿ ಸಂಪರ್ಕಿಸಿ.

ಸನ್ಮಾನ

ಬಸವನಗುಡಿ ಬ್ರಾಹ್ಮಣ ಸಂಘವು ನಗರದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಧಾಳಿ ಲಕ್ಷ್ಮಿನರಸಿಂಹ ಭಟ್ಟ ಅವರಿಗೆ ಸನ್ಮಾನ ಮಾಡಲಾಯಿತು. ಸಂಘದ ಅಧ್ಯಕ್ಷೆ ಶಾರದಾ ಸುಬ್ರಮಣ್ಯ, ಐಎಎಸ್ ಅಧಿಕಾರಿ ಕೆ.ಎನ್. ರಮೇಶ್, ಶಾಸಕ ರವಿ ಸುಬ್ರಮಣ್ಯ, ಕರ್ನಾಟಕ ರಾಜ್ಯ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಚಂದ್ರಶೇಖರ ಹೆಬ್ಬಾರ್, ವಿದ್ಯಾರ್ಥಿ ಭವನ ಹೋಟೆಲ್‌ನ ಅರುಣ್ ಅಡಿಗ, ಆಡನ್ ವಿದ್ಯಾ ಸಂಸ್ಥೆಯ ರಾಮಣ್ಣ ಹಾಗೂ ಸಂಘದ ಪ್ರಧಾನ ಕಾರ್ಯದರ್ಶಿ ಟಿ.ಎಲ್.ಎಸ್. ಕುಮಾರ್ ಇದ್ದಾರೆ

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಕರ್ನಾಟಕ ತಿಗಳರ (ಅಗ್ನಿವಂಶ ಕ್ಷತ್ರಿಯ) ಸಾರ್ವಜನಿಕ ವಿದ್ಯಾಭಿವೃದ್ಧಿ ಸಂಘದಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

2023ನೇ ಸಾಲಿನ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ 90ಕ್ಕೂ ಹೆಚ್ಚು ಅಂಕಗಳಿಸಿದ ತಿಗಳ ಜನಾಂಗದ (ಅಗ್ನಿವಂಶ ಕ್ಷತ್ರಿಯ) ವಿದ್ಯಾರ್ಥಿಗಳು ಆಗಸ್ಟ್ 20ರೊಳಗೆ ಅರ್ಜಿ ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ವಿಳಾಸ: ಕರ್ನಾಟಕ ತಿಗಳರ ಸಾರ್ವಜನಿಕ ವಿದ್ಯಾಭಿವೃದ್ಧಿ ಸಂಘ, 5ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು-10, ಮಾಹಿತಿಗೆ: 080-23200608ಗೆ ಸಂಪರ್ಕಿಸಬಹುದು.

ವಾರ್ಡ್ ಕಚೇರಿಗಳಲ್ಲಿ ‘ಗೃಹಲಕ್ಷ್ಮಿ’ ನೋಂದಣಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಬಿಬಿಎಂಪಿ ವ್ಯಾಪ್ತಿಯಲ್ಲಿ ‘ಗೃಹಲಕ್ಷ್ಮಿ’ ಯೋಜನೆ ಜಾರಿಗೊಳಿಸಲು ಎಲ್ಲಾ ವಾರ್ಡ್ ಕಚೇರಿಗಳಲ್ಲಿ ನೋಂದಣಿ ವ್ಯವಸ್ಥೆ ಮಾಡಲಾಗಿದೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ.

ಪಾಲಿಕೆಯ ಎಲ್ಲಾ ವಾರ್ಡ್ ಕಚೇರಿಗಳಲ್ಲಿ ಸಹಾಯ ಕೇಂದ್ರಗಳನ್ನು ತೆರೆದು ‘ಗೃಹಲಕ್ಷ್ಮಿ’ ಯೋಜನೆ ಫಲಾನುಭವಿಗಳು ನೋಂದಾಯಿಸಿಕೊಳ್ಳಲು ಅವಕಾಶ ಕಲ್ಪಿಸಬೇಕು. ಈ ನಿಟ್ಟಿನಲ್ಲಿ ವಲಯ ಮಟ್ಟದ ಅಧಿಕಾರಿಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜೊತೆ ಸಮನ್ವಯ ಸಾಧಿಸಬೇಕು. ಕಂದಾಯ ವಿಭಾಗದ ಉಪ ಆಯುಕ್ತರಾದ ಲಕ್ಷ್ಮೀದೇವಿ ಅವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ ಎಂದು ವರ್ಚ್ಯುಯಲ್ ಸಭೆಯಲ್ಲಿ ವಲಯ ಆಯುಕ್ತರಿಗೆ ಸೂಚಿಸಿದರು.

ಯೋಜನೆಗೆ ಅರ್ಜಿ ಸಲ್ಲಿಸುವ ಸಂಬಂಧ ಪ್ರತ್ಯೇಕ ಸಿಬ್ಬಂದಿಯನ್ನು ನಿಯೋಜಿಸಬೇಕು. ಆನ್‌ಲೈನ್ ಮೂಲಕ ಅರ್ಜಿ ನೋಂದಾಯಿಸಿಕೊಳ್ಳುವ ಫಲಾನುಭವಿಗಳಿಗೆ ಮಂಜೂರಾತಿ ಪತ್ರ ನೀಡಲು ತರಬೇತಿ ನೀಡಬೇಕು ಎಂದರು.

ಪ್ರತಿ ವಾರ್ಡ್ ಕಚೇರಿ ಮುಂಭಾಗವೂ ‘ಗೃಹಲಕ್ಷ್ಮಿ’ ಯೋಜನೆ ನೋಂದಣಿ ಕೇಂದ್ರ ಎಂಬ ಬ್ಯಾನರ್ ಅಳವಡಿಸಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಆಡಿಯೊ, ವಿಡಿಯೊ ಕ್ಲಿಪ್ಸ್ ಪಡೆದು ನಗರದ ಜನದಟ್ಟಣೆ ಪ್ರದೇಶ, ಕೊಳೆಗೇರಿಗಳಲ್ಲಿ ಹೆಚ್ಚಿನ ಪ್ರಚಾರ ನೀಡಬೇಕು. ಎಲ್ಲ ಫಲಾನುಭವಿಗಳು ನೋಂದಣಿ ಮಾಡಿಕೊಳ್ಳುವಂತೆ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ವೆಬ್‌ಸೈಟ್‌ನಲ್ಲಿ ಮಾಹಿತಿ: ವಾರ್ಡ್ ಕಚೇರಿಗಳಲ್ಲಿ ಸಹಾಯ ಕೇಂದ್ರಗಳ ವಿಳಾಸ, ಇತರೆ ಮಾಹಿತಿಯನ್ನು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಧಿಕಾರಿಗಳಿಗೆ ತುಷಾರ್ ಗಿರಿನಾಥ್ ಆದೇಶಿಸಿದರು.

ಟೀಂಲೀಸ್ ಸರ್ವೀಸಸ್ ಲಿಮಿಟೆಡ್

CIN: L74140KA2000PLC118395

315 ವರ್ಕ್ ಅವೆನ್ಯೂ ಕ್ಯಾಂಪಸ್, ಅಸೆಂಟ್ ಬಿಲ್ಡಿಂಗ್, ನಂ.77, ಕೋರಮಂಗಲ ಇಂಡಸ್ಟ್ರಿಯಲ್ ಲೇಔಟ್, ಜ್ಯೋತಿ ನಿವಾಸ್ ಕಾಲೇಜು ರಸ್ತೆ, ಕೋರಮಂಗಲ, ಬೆಂಗಳೂರು – 560095, ಕರ್ನಾಟಕ, ಭಾರತ.

ದೂರವಾಣಿ: + 91 80 6824 3333 / ಫ್ಯಾಕ್ಸ್: + 91 80 6824 3001

corporateaffairs@teamlease.com | https://group.teamlease.com/

ಪುರಸಭಾ ಕಾರ್ಯಾಲಯ, ಬಿಡದಿ

ಬಿಡದಿ ಹೋಬಳಿ, ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ–562109

ಸಂಖ್ಯೆ:ಪುಕಾಬಿ/ತಾಂ.ಶಾ–2/ಸಿಆರ್/ಟೆ.ಪ್ರ/06/2023–24 ದಿನಾಂಕ: 25–07–2023

ಟೆಂಡರ್ ಪ್ರಕಟಣೆ

(ಸ್ಟಾಂಡರ್ಡ್ ಡಾಕ್ಯುಮೆಂಟ್ KW-1 ರ ನಿಬಂಧನೆಗಳಂತೆ ಅರ್ಜಿ ಆಹ್ವಾನಿಸಲಾಗಿದೆ)

ಬಿಡದಿ ಪುರಸಭಾ ವ್ಯಾಪ್ತಿಯಲ್ಲಿ 2023–24ನೇ ಸಾಲಿನ ಪುರಸಭೆ ಅನುದಾನದಡಿ ಪುರಸಭೆ ವ್ಯಾಪ್ತಿಯ ಈ ಕೆಳಕಂಡ ಕಾಮಗಾರಿಗಳನ್ನು ನಿರ್ವಹಿಸಲು ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿಸಲ್ಪಟ್ಟ ಅರ್ಹ 3 ಮತ್ತು ಮೇಲ್ದರ್ಜೆ ಗುತ್ತಿಗೆದಾರರಿಂದ ಟೆಂಡರ್ ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಪುರಸಭೆಯ ಅಭಿಯಂತರರನ್ನು ವಿಚಾರಿಸಬಹುದು. ಅಥವಾ ಪುರಸಭೆಯ ಅಂತರ್‌ಜಾಲದಲ್ಲಿ ಪಡೆಯಬಹುದು.

ಕ್ರ. ಸಂ.	ಕಾಮಗಾರಿಗಳ ವಿವರಗಳು	ಅಂದಾಜು ಮೊತ್ತ ರೂ. ಲಕ್ಷಗಳಲ್ಲಿ	ಟೆಂಡರ್ ಫಾರಂ ಮೊತ್ತ ರೂ. ಗಳಲ್ಲಿ	ಇ.ಎಂ.ಡಿ ಮೊತ್ತ ರೂ. ಗಳಲ್ಲಿ
1	ಬಿಡದಿ ಪುರಸಭೆ ವ್ಯಾಪ್ತಿಯ ವಾರ್ಡ್ ನಂ. 16ರ ಬಾನಂದೂರು ಗ್ರಾಮದ ಅಂಬೇಡ್ಕರ್ ಭವನದ ಹತ್ತಿರ ಕಲ್ವರ್ಟ್ ನಿರ್ಮಾಣ ಕಾಮಗಾರಿ.	2.80	1000–00	7000–00

1. ಟೆಂಡರ್ ಫಾರಂಗಳನ್ನು ಪಡೆಯುವ ದಿನಾಂಕ: 28–07–2023 ಬೆಳಗ್ಗೆ 10–00 ಗಂಟೆಯಿಂದ
2. ಭರ್ತಿ ಮಾಡಿದ ಟೆಂಡರ್ ಫಾರಂನ್ನು ಸಲ್ಲಿಸುವ ಕೊನೆಯ ದಿನಾಂಕ: 12–08–2023 ಸಂಜೆ 5–30 ಗಂಟೆಯವರೆಗೆ.
3. ಟೆಂಡರ್‌ನ್ನು ತೆರೆಯುವ ದಿನಾಂಕ: 14–08–2023 ಬೆಳಗ್ಗೆ 11–00 ಗಂಟೆಯವರೆಗೆ.

ಸಹಿ/– ಆಡಳಿತಾಧಿಕಾರಿಗಳು, ಪುರಸಭೆ, ಬಿಡದಿ

ಸಹಿ/– ಮುಖ್ಯಾಧಿಕಾರಿ, ಪುರಸಭೆ, ಬಿಡದಿ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

ಮುಖ್ಯ ವೈದ್ಯಾಧಿಕಾರಿಗಳ ಕಚೇರಿ, ಸಾರ್ವಜನಿಕ ಆಸ್ಪತ್ರೆ, ನೆಲಮಂಗಲ ಬೆಂಗಳೂರು ಗ್ರಾಮಾಂತರ ಜಿಲ್ಲೆ.

ಸಂಖ್ಯೆ: ಸಾಆನೆ/20/2022–23 ದಿನಾಂಕ: 26.07.2023

ಅಲ್ಪಾವಧಿ ಟೆಂಡರ್ ಪ್ರಕಟಣೆ

ಸಾರ್ವಜನಿಕ ಆಸ್ಪತ್ರೆ, ನೆಲಮಂಗಲ ಇಲ್ಲಿಗೆ **2023–24ನೇ ಸಾಲಿಗೆ ನಾನ್‌ಕ್ಲಿನಿಕಲ್ ಮತ್ತು ಗ್ರೂಪ್–ಡಿ ನೌಕರರ ಹೊರಗುತ್ತಿಗೆ ಸೇವೆಯನ್ನು ಒದಗಿಸುವ ಸಂಬಂಧ** ಅಧಿಕೃತ ಸಂಸ್ಥೆದಾರರಿಂದ ಕಾರ್ಯಗತ ಮಾಡಲು ದ್ವಿ–ಲಕೋಟೆ ಪದ್ಧತಿ ಅನ್ವಯ ಕರ್ನಾಟಕ ಪಾರದರ್ಶಕ ನಿಯಮ 1999–2000 ರಂತೆ ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಅಲ್ಪಾವಧಿ ಟೆಂಡರ್ ಕರೆಯಲಾಗಿದೆ.

ಅರ್ಹ ಅಧಿಕೃತ ಸಂಸ್ಥೆದಾರರು ಖಾಲಿ ಟೆಂಡರ್ ಫಾರಂಗಳನ್ನು ದಿನಾಂಕ: **27.07.2023 ರಿಂದ ದಿನಾಂಕ: 10.08.2023ರ ಅಪರಾಹ್ನ 4.00 ಗಂಟೆಯೊಳಗೆ** ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಪಡೆಯಬಹುದು. ಭರ್ತಿ ಮಾಡಿದ ಟೆಂಡರ್ ಫಾರಂಗಳನ್ನು ದ್ವಿ–ಲಕೋಟೆ ಪದ್ಧತಿಯಂತೆ ಸಲ್ಲಿಸುವುದು.

ಅರ್ಹ ಸಂಸ್ಥೆಗಳು ಇ–ಪ್ರೊಕ್ಯೂರ್‌ಮೆಂಟ್ ಮೂಲಕ ದಿನಾಂಕ: **10.08.2023ರಂದು ಅಹರಾಹ್ನ 4.00 ಗಂಟೆಯೊಳಗಾಗಿ** ಅರ್ಜಿ ಸಲ್ಲಿಸಬಹುದಾಗಿದ್ದು (ಅಪ್‌ಲೋಡ್), ಟೆಂಡರ್ ಫಾರಂನ ಬೆಲೆ ರೂ. 1000/– (ಹಿಂದಿರುಗಿಸಲಾಗುವುದಿಲ್ಲ).

ತಾಂತ್ರಿಕ ಲಕೋಟೆ ತೆರೆಯುವ ದಿನಾಂಕ: **14.08.2023 ಅಪರಾಹ್ನ 4.30 ಗಂಟೆ** ಮತ್ತು ಆರ್ಥಿಕ ಲಕೋಟೆ ತೆರೆಯುವ ದಿನಾಂಕ: **17.08.2023 ಅಪರಾಹ್ನ 12.00 ಗಂಟೆಗೆ.** ಹೆಚ್ಚಿನ ವಿವರಗಳನ್ನು ವೆಬ್‌ಸೈಟ್ **www.kppp.karnataka.gov.in** ಮೂಲಕ ಅಥವಾ ಆಸ್ಪತ್ರೆಯ ಕಚೇರಿ ವೇಳೆಯಲ್ಲಿ ಪಡೆಯಬಹುದು.

ಸಹಿ/– ಮುಖ್ಯ ವೈದ್ಯಾಧಿಕಾರಿಗಳು

DIPR/CP/676/Yakshi/2023-24

ನೈಋತ್ಯ ರೈಲ್ವೆ

ಇ-ಟೆಂಡರು ಸೂಚನೆ ಸಂ.: SBC-GSU-ENGG-2023-18

ಈ ಕೆಳ ಸಹಿದಾರರು, ಭಾರತದ ರಾಷ್ಟ್ರಪತಿಗಳ ಪರವಾಗಿ ಕೆಳಗಡೆ ನೀಡಿರುವ ಕಾಮಗಾರಿಗಳಿಗೆ ಇ-ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ:

ಕಾಮಗಾರಿಯ ವಿವರ	ಅಂದಾಜು ಮೌಲ್ಯ
ಬೆಂಗಳೂರು ದಂಡು –	ರೂ. 16,31,84,044.78

ನೈಋತ್ಯ ರೈಲ್ವೆ

ಟೀಂಲೀಸ್ ಸರ್ವೀಸಸ್ ಲಿಮಿಟೆಡ್

CIN: L74140KA2000PLC118395

ನೋಂದಾಯಿತ ಕಚೇರಿ: 315 ವರ್ಕ್ ಅವೆನ್ಯೂ ಕ್ಯಾಂಪಸ್, ಅಸೆಂಟ್ ಬಿಲ್ಡಿಂಗ್, ನಂ.77, ಕೋರಮಂಗಲ ಇಂಡಸ್ಟ್ರಿಯಲ್ ಲೇಔಟ್, ಜ್ಯೋತಿ ನಿವಾಸ್ ಕಾಲೇಜು ರಸ್ತೆ, ಕೋರಮಂಗಲ, ಬೆಂಗಳೂರು – 560095, ಕರ್ನಾಟಕ, ಭಾರತ.

E-MAIL: corporateaffairs@teamlease.com | WEBSITE: https://group.teamlease.com/

30ನೇ ಜೂನ್ 2023ಕ್ಕೆ ಕೊನೆಯಾದ ತ್ರೈಮಾಸಿಕಕ್ಕೆ ಅಪರಿಶೋಧಿತ ಆರ್ಥಿಕ ಫಲಿತಾಂಶಗಳ ಸಾರಾಂಶ

(ಶೇರು ತಲಾವಾರು ದತ್ತವನ್ನು ಹೊರತುಪಡಿಸಿ ಉಳಿದ ಅಂಕೆಗಳು ಲಕ್ಷ ರೂಪಾಯಿಗಳಲ್ಲಿ)

ವಿವರಗಳು	ಏಕಿಕೃತ: 30.06.2023ಕ್ಕೆ ಕೊನೆಯಾದ 3 ತಿಂಗಳಿಗೆ (ಅಪರಿಶೋಧಿತ)	ಏಕಿಕೃತ: ಹಿಂದಿನ ಅವಧಿಯ 3 ತಿಂಗಳಿಗೆ ಕೊನೆಯಾದ 30.06.2022ಕ್ಕೆ (ಅಪರಿಶೋಧಿತ)	ಕ್ರೋಢೀಕೃತ: 30.06.2023ಕ್ಕೆ ಕೊನೆಯಾದ 3 ತಿಂಗಳಿಗೆ (ಅಪರಿಶೋಧಿತ)	ಕ್ರೋಢೀಕೃತ: ಹಿಂದಿನ ಅವಧಿಯ 3 ತಿಂಗಳಿಗೆ ಕೊನೆಯಾದ 30.06.2022ಕ್ಕೆ (ಅಪರಿಶೋಧಿತ)
ಕಾರ್ಯಾಚರಣೆಗಳಿಂದ ಒಟ್ಟು ಆದಾಯ	1,97,198.97	1,63,039.14	2,18,564.46	1,89,165.32
ಸದರಿ ಅವಧಿಗೆ ನಿವ್ವಳ ಲಾಭ / (ನಷ್ಟ) (ತೆರಿಗೆಗೆ ಮುನ್ನ, ಅಸಾಮಾನ್ಯ ಮತ್ತು/ಅಥವಾ ಅಸಾಧಾರಣ ಐಟಂಗಳು)	2,798.93	2,325.48	2,582.77	2,788.06
ಸದರಿ ಅವಧಿಗೆ ತೆರಿಗೆಗೆ ನಂತರ ನಿವ್ವಳ ಲಾಭ / (ನಷ್ಟ) (ಅಸಾಮಾನ್ಯ ಮತ್ತು/ ಅಥವಾ ಅಸಾಧಾರಣ ಐಟಂಗಳ ನಂತರ)	2,740.52	2,329.98	2,575.92	2,652.12
ಸದರಿ ಅವಧಿಗೆ ಒಟ್ಟು ಸಮಗ್ರವಾದ ಆದಾಯ [ಸದರಿ ಅವಧಿಗೆ ತೆರಿಗೆ ಕಳೆದ ನಂತರದ ಲಾಭ / (ನಷ್ಟ) ಸೇರಿದಂತೆ ಮತ್ತು ಇತರೆ ಸಮಗ್ರ ಆದಾಯ (ತೆರಿಗೆ ಕಳೆದು)]	2,798.93	2,318.85	2,571.30	2,653.87
ಪೇಯ್ಡ್–ಅಪ್ ಇಕ್ವಿಟಿ ಶೇರು ಬಂಡವಾಳ (ಮುಖ ಬೆಲೆ ತಲಾ 10 ರೂ.)	1,676.89	1,709.68	1,676.89	1,709.68
ಮೀಸಲುಗಳು (ಮರುಮೌಲ್ಯಮಾಪನ ಮೀಸಲುಗಳನ್ನು ಬಿಟ್ಟು)–ಹಿಂದಿನ ಲೆಕ್ಕ ವರ್ಷದ ಬ್ಯಾಲೆನ್ಸ್ ಷೀಟ್ ಪ್ರಕಾರ	76,037.97	66,141.89	79,052.79	67,611.33
ತಲಾ ಶೇರಿಗೆ ಗಳಿಕೆ (ಮುಖ ಬೆಲೆ ತಲಾ 10 ರೂ.) (ವಾರ್ಷಿಕಿಕರಣಗೊಂಡಿಲ್ಲ)				
(ಎ) ಮೂಲ (ರೂ.)	16.12	13.63	15.53	15.51
(ಬಿ) ಡೈಲ್ಯೂಟೆಡ್ (ರೂ.)	16.12	13.63	15.53	15.51

ಮೇಲಿನ ಹೇಳಿಕೆಯು ಸ್ಟಾಕ್ ಎಕ್ಸ್‌ಚೇಂಜಿನಲ್ಲಿ ದಾಖಲಿಸಿರುವ, ಸೆಬಿ (ಲಿಸ್ಟಿಂಗ್ ಆಬ್ಲಿಗೇಶನ್ಸ್ ಆ್ಯಂಡ್ ಡಿಸ್‌ಕ್ಲೋಸರ್ ರಿಕ್ವೈರ್‌ಮೆಂಟ್ಸ್) ವಿಧಾಯಕಗಳು, 2015ರ (“ವಿಧಾಯಕಗಳು”) ವಿಧಾಯಕ 33ರ ಅಡಿಯಲ್ಲಿ ಪ್ರಕಟವಾಗಿರುವ, 30ನೇ ಜೂನ್, 2023ಕ್ಕೆ ಕೊನೆಯಾದ ತ್ರೈಮಾಸಿಕದ ಅಪರಿಶೋಧಿತ ಆರ್ಥಿಕ ಫಲಿತಾಂಶಗಳ ಪೂರ್ಣ ರೂಪದ ಸಾರಾಂಶವಾಗಿದೆ. ಅಪರಿಶೋಧಿತ ಏಕಿಕೃತ ಮತ್ತು ಕ್ರೋಢೀಕೃತ ಆರ್ಥಿಕ ಫಲಿತಾಂಶಗಳ ಪೂರ್ಣ ರೂಪವು ... BSE ವೆಬ್‌ಸೈಟ್ (www.bseindia.com) ಮತ್ತು NSE ವೆಬ್‌ಸೈಟ್ (www.nseindia.com) ... (https://group.teamlease.com/) ...

ದಿನಾಂಕ: 26ನೇ ಜುಲೈ, 2023

ಸ್ಥಳ: ಬೆಂಗಳೂರು

DIN: 00151814